# ನಗರಸಭಾ ಕಾರ್ಯಾಲಯ, ತುಮಕೂರು

ನಂ.ನಸತು:ತಾಂಶಾ/ಟೆಂಡರ್/ಸಿಆರ್/137/2007–08 ದಿನಾಂಕ 18–09–2008.

## ಅಲ್ಪಾವಧಿ ಟೆಂಡರ್ ಪ್ರಕಟಣೆ

ತುಮಕೂರು ನಗರಸಭಾ ವ್ಯಾಪ್ತಿಯ ನಗರಸಭಾ ನಿಧಿ ಯೋಜನೆ ಅಡಿಯಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿನ ಪಾರದರ್ಶಕತೆಯ ಆಧ್ಯಾದೇಶ 2000 ರಂತೆ ಹಾಗೂ ಲೋಕೋಪಯೋಗಿ ಇಲಾಖೆ ಸಂಹಿತೆ ಭಾಗ–11 ಪಿಡಬ್ಲ್ಯೂಜಿ–65 ಮತ್ತು 66 ನಿಬಂಧನೆಗೊಳಪಟ್ಟು ಅರ್ಹ ದರ್ಜೆಯ ಲೋಕೋಪಯೋಗಿ ಇಲಾಖೆಯಲ್ಲಿ ಹಾಗೂ ಪಂಚಾಯತ್ ರಾಜ್ ಗ್ರಾಮೀಣಾಭಿವೃದ್ಧಿ ಇಂಜಿನಿಯರಿಂಗ್ ಇಲಾಖೆಯಲ್ಲಿ ನೊಂದಾಯಿಸಿದ ಗುತ್ತಿಗೆದಾರರುಗಳಿಂದ ನಿಗದಿಪಡಿಸಿದ ನಮೂನೆಗಳಲ್ಲಿ ಮೊಹರು ಮಾಡಲಾದ ಲಕೋಟೆಯ ಮೇಲೆ ಕಾಮಗಾರಿಯ ಹೆಸರನ್ನು ನಮೂದಿಸಿದ ಶೇಕಡವಾರು / ಐಟಂವಾರು ಟೆಂಡರ್‌ಗಳನ್ನು ದ್ವಿಪ್ರತಿಯಲ್ಲಿ ಪೌರಾಯುಕ್ತರು, ನಗರಸಭೆ, ತುಮಕೂರು ಇವರಿಗೆ ಸಲ್ಲಿಸಲು ಆಹ್ವಾನಿಸಲಾಗಿದೆ.

1. ಟೆಂಡರ್ ಹಾಕಲು ಇಚ್ಛಿಸುವ ಗುತ್ತಿಗೆದಾರರು ಟೆಂಡರ್ ದಾಖಲಾತಿಗಳಿಗಾಗಿ ದಿನಾಂಕ 04–10–2008 ರವರೆಗೆ ಕಛೇರಿ ವೇಳೆಯಲ್ಲಿ ಅರ್ಜಿಯನ್ನು ಕಾಮಗಾರಿಗೆ ನಿಗದಿಪಡಿಸಿದ ಅರ್ಜಿ ಶುಲ್ಕವನ್ನು ಪಾವತಿ ಮಾಡಿ ಪೌರಾಯುಕ್ತರು, ನಗರಸಭೆ, ತುಮಕೂರು ರವರಿಗೆ ಸಲ್ಲಿಸಬಹುದಾಗಿದೆ. ನಂತರ ಬಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.
2. ಟೆಂಡರ್ ಫಾರಂಗಳನ್ನು ದಿನಾಂಕ 04–10–2008ರವರೆಗೆ ಕಛೇರಿಯ ವೇಳೆಯಲ್ಲಿ ಅರ್ಹ ಗುತ್ತಿಗೆದಾರರಿಗೆ ನೀಡಲಾಗುವುದು.
3. ಭರ್ತಿ ಮಾಡಿದ ಫಾರಂಗಳನ್ನು ದಿನಾಂಕ 06–10–2008 ರಂದು ಸಂಜೆ 4.30 ಗಂಟೆಯೊಳಗಾಗಿ ಪೌರಾಯುಕ್ತರು, ನಗರಸಭೆ, ತುಮಕೂರು ರವರ ಕೊಠಡಿಯಲ್ಲಿ ಇಟ್ಟಿರುವ ಟೆಂಡರ್ ಬಾಕ್ಸ್ ನಲ್ಲಿ ಅಥವಾ ಮಾನ್ಯ ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿಕೋಶ, ಜಿಲ್ಲಾಧಿಕಾರಿಗಳವರ ಕಛೇರಿ, ತುಮಕೂರು ರವರ ಕಛೇರಿಯಲ್ಲಿ ಇಟ್ಟಿರುವ ಟೆಂಡರ್ ಬಾಕ್ಸ್‌ನಲ್ಲಿ ಹಾಕಬಹುದಾಗಿದೆ.
4. ಟೆಂಡರ್ ಫಾರಂಗಳನ್ನು ಸಾಧ್ಯವಾದರೆ ಅಂದೇ ಅಥವಾ ಮರುದಿನ ಕಛೇರಿ ವೇಳೆಯಲ್ಲಿ ಹಾಜರಿರುವ ಗುತ್ತಿಗೆದಾರರ ಸಮ್ಮುಖದಲ್ಲಿ ತೆರೆಯಲಾಗುವುದು.
5. ಕಾಮಗಾರಿ ಕ್ರಮ ಸಂಖ್ಯೆ 1, 2, 3, 4,7 ಮತ್ತು 8 ಶೇಕಡವಾರು ಟೆಂಡರ್ ಹಾಗೂ ಕ್ರಮ ಸಂಖ್ಯೆ 5, 6 ಐಟಂವಾರು ಟೆಂಡರ್‌ಗಳಾಗಿರುತ್ತದೆ.
6. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್: www.tumkurcity.gov.in ಹಾಗೂ ನಗರಸಭೆಯ ತಾಂತ್ರಿಕ ಶಾಖೆಯಲ್ಲಿ ಕಛೇರಿ ವೇಳೆಯಲ್ಲಿ ಪಡೆಯಬಹುದು.

| ಕ್ರ. ಸಂ. | ಕಾಮಗಾರಿಯ ಹೆಸರು | ಅಂದಾಜು ಮೊತ್ತ(ರೂ ಲಕ್ಷಗಳಲ್ಲಿ) | ಇಎಂಡಿ ಮೊತ್ತ (ರೂ.ಗಳಲ್ಲಿ) | ಅರ್ಹ ದರ್ಜೆ ಗುತ್ತಿಗೆದಾರರು | ಟೆಂಡರ್ ಫಾರಂ ಬೆಲೆ+ ತೆರಿಗೆ (ಹಿಂದಿರುಗಿ ಸುವುದಿಲ್ಲ) | ಕಾಮಗಾರಿ ಪೂರ್ಣಗೊಳಿಸಲು ಕಾಲಾವಧಿ |
|---|---|---|---|---|---|---|
| 1 | ನಗರಸಭಾ ವ್ಯಾಪ್ತಿಯ ಮಂಡಿಪೇಟೆ ರಸ್ತೆ, ಜೆ.ಸಿ. ರಸ್ತೆ ಮತ್ತು ಕೆ.ಕೆ. ರಸ್ತೆಯಲ್ಲಿ ಹಾಗೂ ಅವಶ್ಯಕತೆ ಇರುವ ರಸ್ತೆಗಳಲ್ಲಿ ಗುಂಡಿ ಮುಚ್ಚುವ ಕಾಮಗಾರಿ. | 4.96 | 12400.00 | 3ನೇ ದರ್ಜೆ ಮತ್ತು ಮೇಲ್ಪಟ್ಟು | 500+ ತೆರಿಗೆ | ಒಂದು ತಿಂಗಳು |
| 2 | ನಗರಸಭಾ ವ್ಯಾಪ್ತಿಯ ಟೌನ್‌ಹಾಲ್ ವೃತ್ತದಿಂದ ಚರ್ಚ್ ವೃತ್ತದ | 4.92 | 12300.00 | 3ನೇ ದರ್ಜೆ | 500+ ತೆರಿಗೆ | ಒಂದು ತಿಂಗಳು |

| | | | | | | |
|---|---|---|---|---|---|---|
| | ಮುಖಾಂತರ ಕೋಟೆ ಆಂಜನೇಯ ಸ್ವಾಮಿ ವೃತ್ತದವರೆಗೆ ಮತ್ತು ಅವಶ್ಯಕತೆ ಇರುವ ಸ್ಥಳಗಳಲ್ಲಿ ಗುಂಡಿ ಮುಚ್ಚುವ ಕಾಮಗಾರಿ. | | | ಮತ್ತು ಮೇಲ್ಪಟ್ಟು | | |
| 3 | ನಗರಸಭಾ ವ್ಯಾಪ್ತಿಯ ಶ್ರೀದೇವಿ ಇಂಜಿನಿಯರಿಂಗ್ ಕಾಲೇಜು ಮುಂಭಾಗ, ಲಿಂಗಾಪುರದ ವೃತ್ತದವರೆಗೆ ರಸ್ತೆಯಲ್ಲಿ ಗುಂಡಿಗಳನ್ನು ಮುಚ್ಚುವ ಕಾಮಗಾರಿ. | 4.99 | 12250.00 | 3ನೇ ದರ್ಜೆ ಮತ್ತು ಮೇಲ್ಪಟ್ಟು | 500+ ತೆರಿಗೆ | ಒಂದು ತಿಂಗಳು |
| 4 | ನಗರಸಭಾ ವ್ಯಾಪ್ತಿಯಲ್ಲಿ ಕೋಡಿ ಬಸವೇಶ್ವರ ದೇವಸ್ಥಾನ ಹತ್ತಿರ, ಕೆ.ಎಸ್.ಆರ್. ಬಸ್ ತಂಗುದಾಣ, ಪರಿಸರ ಮಾಲಿನ್ಯ ಕಛೇರಿಯ ಮುಂಭಾಗದಲ್ಲಿ ರಸ್ತೆಯಲ್ಲಿನ ಗುಂಡಿಗಳನ್ನು ಮುಚ್ಚುವ ಕಾಮಗಾರಿ. | 4.99 | 12250.00 | 3ನೇ ದರ್ಜೆ ಮತ್ತು ಮೇಲ್ಪಟ್ಟು | 500+ ತೆರಿಗೆ | ಒಂದು ತಿಂಗಳು |
| 5 | ನಗರದ ಜೆ.ಸಿ. ರಸ್ತೆಯಿಂದ ವೀರಸೌಧ ಮುಖಾಂತರ ಗುಬ್ಬಿವೀರಣ್ಣ ಕಲಾಕ್ಷೇತ್ರದ ಹಿಂಭಾಗದ ರಸ್ತೆ ಅಭಿವೃದ್ಧಿ ಮತ್ತು ಡೆಕ್‌ಸ್ಲಾಬ್ ನಿರ್ಮಾಣ ಕಾಮಗಾರಿ. | 7.20 | 14400.00 | 3ನೇ ದರ್ಜೆ ಮತ್ತು ಮೇಲ್ಪಟ್ಟು | 1000+ ತೆರಿಗೆ | ಒಂದು ತಿಂಗಳು |
| 6 | ನಗರದ ಖಾಸಗಿ ಬಸ್ ನಿಲ್ದಾಣದ ಒಳಗಡೆಯಿಂದ ಗುಬ್ಬಿವೀರಣ್ಣ ಕಲಾಕ್ಷೇತ್ರದ ಮುಖಾಂತರ ದೊಡ್ಡ ಚರಂಡಿಯವರೆಗೆ ಕಾಂಕ್ರೀಟ್ ಚರಂಡಿ ನಿರ್ಮಾಣ ಕಾಮಗಾರಿ. | 6.10 | 12200.00 | 3ನೇ ದರ್ಜೆ ಮತ್ತು ಮೇಲ್ಪಟ್ಟು | 1000+ ತೆರಿಗೆ | ಒಂದು ತಿಂಗಳು |
| 7 | ತುಮಕೂರು ಸೋಮೇಶ್ವರಪುರಂ ಮುಖ್ಯ ರಸ್ತೆಯಲ್ಲಿ ಗುಂಡಿ ಮುಚ್ಚುವ ಕಾಮಗಾರಿ. | 0.45 | 1125.00 | 4ನೇ ದರ್ಜೆ ಮತ್ತು ಮೇಲ್ಪಟ್ಟು | 250+ ತೆರಿಗೆ | ಒಂದು ತಿಂಗಳು |
| 8 | ನಗರದ ಮೇಳೆಕೋಟೆ ರಸ್ತೆ ಇಸ್ರಾ ಶಾದಿಮಹಲ್ ಹತ್ತಿರ ಡೆಕ್‌ಸ್ಲಾಬ್ ನಿರ್ಮಾಣ | 1.51 | 3775.00 | 3ನೇ ದರ್ಜೆ ಮತ್ತು ಮೇಲ್ಪಟ್ಟು | 500+ ತೆರಿಗೆ | ಒಂದು ತಿಂಗಳು |

## ಷರತ್ತುಗಳು

1. ಟೆಂಡರ್ ಫಾರಂ ಬೆಲೆಯನ್ನು ನಗದಾಗಿ ನಗರಸಭೆಯ ನಗದು ಶಾಖೆಯಲ್ಲಿ ಪಾವತಿಸಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಯನ್ನು ಸಲ್ಲಿಸುವಾಗ ಲೋಕೋಪಯೋಗಿ ಇಲಾಖೆಯಲ್ಲಿ ಅರ್ಹ ದರ್ಜೆ ನೊಂದಾಯಿತರಾಗಿರುವ ಬಗ್ಗೆ ಪ್ರಮಾಣ ಪತ್ರವನ್ನು ಹಾಜರುಪಡಿಸಿ ದಾಖಲಾತಿ ಪುಸ್ತಕ (ಪಾಸ್ ಬುಕ್)ದಲ್ಲಿ ದಾಖಲಾತಿ ಮಾಡಿಸಿಕೊಳ್ಳಬೇಕು.
2. ಇಎಂಡಿ ಹಣವನ್ನು ಪೌರಾಯುಕ್ತರು, ನಗರಸಭೆ, ತುಮಕೂರು ಇವರ ಹೆಸರಿಗೆ ಜಮಾ ಮಾಡಬಹುದಾದಂತಹ ಡಿಡಿ / ಎಫ್‌ಡಿಆರ್‌ಗಳನ್ನು ಅಥವಾ ನಗರಸಭಾ ಕಾರ್ಯಾಲಯದಲ್ಲಿ ಜಮಾ ಮಾಡಿದ ರಸೀದಿಯನ್ನು ಟೆಂಡರ್ ಜೊತೆಯಲ್ಲಿ ಸಲ್ಲಿಸಬೇಕು.
3. ಟೆಂಡರ್ ಫಾರಂನಲ್ಲಿ ದರವನ್ನು ಅಂಕಿ ಮತ್ತು ಅಕ್ಷರಗಳಲ್ಲಿ ಸ್ಪಷ್ಟವಾಗಿ ನಮೂದಿಸಬೇಕು.
4. ಮೇಲೆ ನಿಗದಿಪಡಿಸಿರುವ ಯಾವುದೇ ದಿನಾಂಕಗಳು ಸರ್ಕಾರಿ ರಜಾ ದಿನಗಳೆಂದು ಘೋಷಿಸಲ್ಪಟ್ಟಲ್ಲಿ ಮುಂದಿನ ಕೆಲಸದ ದಿನವನ್ನು ಪರಿಗಣಿಸಲಾಗುವುದು.

5. ನಿಬಂಧನೆಗಳನ್ನು ನಮೂದಿಸಿ ಸಲ್ಲಿಸುವ ಟೆಂಡರ್‌ಗಳನ್ನು ತಿರಸ್ಕರಿಸಲಾಗುವುದು.
6. ಯಾವ ಕಾರಣವನ್ನು ಸಹ ನೀಡದೆ ಯಾವುದೇ ಅಥವಾ ಎಲ್ಲಾ ಟೆಂಡರ್‌ಗಳನ್ನು ತಿರಸ್ಕರಿಸುವ ಅಧಿಕಾರವನ್ನು ನಗರಸಭೆ ಕಾಯ್ದಿರಿಸಿಕೊಂಡಿದೆ.
7. ಮೇಲಿನ ಕಾಮಗಾರಿಯಲ್ಲಿ ಏನಾದರೂ ಸೇರ್ಪಡೆ ಅಥವಾ ಮಾರ್ಪಡಿಸುವ ಹಕ್ಕನ್ನು ನಗರಸಭೆ ಕಾಯ್ದಿರಿಸಿಕೊಂಡಿದೆ.
8. ಕಾಮಗಾರಿಗೆ ಬೇಕಾದ ಎಲ್ಲಾ ಸಾಮಗ್ರಿಗಳನ್ನು ಗುತ್ತಿಗೆದಾರರೇ ಒದಗಿಸಿಕೊಳ್ಳತಕ್ಕದ್ದು. ಹಾಲಿ ಕಾಮಗಾರಿಗಳನ್ನು ಪ್ರಾರಂಭಿಸುವ ಮೊದಲು ಕಾಮಗಾರಿಗೆ ಬೇಕಾಗಿರುವ ಸಾಮಗ್ರಿಗಳ ಗುಣಮಟ್ಟದ ಪರೀಕ್ಷಾ ವರದಿಯನ್ನು ಮಾನ್ಯತೆ ಪಡೆದಿರುವ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಪಡೆದು ಸಲ್ಲಿಸುವುದು.
9. **ಕ್ರಮ ಸಂಖ್ಯೆ 1, 2, 3, 4 ಮತ್ತು 7ರ ಮೇಲಿನ ಕಾಮಗಾರಿಗಳಿಗೆ ಸ್ವಂತವಾಗಿ ಹೆಚ್.ಎಂ.ಪಿ. ಪೇವರ್, ಹಾಟ್ ಮಿಕ್ಸ್ ಪ್ಲಾಂಟ್‌ಗಳನ್ನು ಹೊಂದಿರಬೇಕು. ಇತರೆ ಅವಶ್ಯಕ ಯಂತ್ರೋಪಕರಣಗಳನ್ನು ಸ್ವತಃವಾಗಿ ಹೊಂದಿರತಕ್ಕದ್ದು. ಈ ಬಗ್ಗೆ ದಾಖಲಾತಿಗಳನ್ನು ಅರ್ಜಿ ಸಲ್ಲಿಸುವ ಸಮಯದಲ್ಲಿ ಒದಗಿಸತಕ್ಕದ್ದು. ಇಲ್ಲವಾದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.**
10. ಗುತ್ತಿಗೆದಾರರು ಕೆಲಸ ನಿರ್ವಹಿಸುವ ಸಮಯದಲ್ಲಿ ಕೆಲಸ ನಿರ್ವಹಿಸುವ ಮುನ್ನ ಕೆಲಸ ನಿರ್ವಹಿಸುವಾಗ ಮತ್ತು ಕೆಲಸ ಪೂರ್ಣಗೊಂಡಾಗ ವಿವಿಧ ಹಂತಗಳ ಫೋಟೋಗಳನ್ನು ತಮ್ಮ ಸ್ವಂತ ಖರ್ಚಿನಲ್ಲಿ ತೆಗೆಸಿ ಸಲ್ಲಿಸುವುದು.

ಸಹಿ/–
**(ಎನ್.ಆರ್.ಆದರ್ಶಕುಮಾರ್)**
**ಪೌರಾಯುಕ್ತರು**
**ನಗರಸಭೆ, ತುಮಕೂರು.**

ಸಹಿ/–
**(ಡಾ// ಸಿ.ಸೋಮಶೇಖರ್ ಭಾ.ಆ.ಸೇ)**
**ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು**
**ನಗರಸಭೆ, ತುಮಕೂರು.**